ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

DMFT ಯ ಅನುದಾನದ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

33 (216) ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ (DMFT) ಗಳು ಅಸ್ತಿತ್ವದಲ್ಲಿ ಇವೆಯೇ; ಇದ್ದಲ್ಲಿ ಅವು ಯಾವುವು ; ಹಾಗೂ ಇವುಗಳ ಸ್ಥಾಪನೆಯ ಉದ್ದೇಶಗಳೇನು; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಟ್ರಸ್ಟ್‌ಗಳ ಅಡಿ ಹಾಲಿ ಲಭ್ಯವಿರುವ ಅನುದಾನವೆಷ್ಟು ; ಸದರಿ ಅನುದಾನವನ್ನು ಯಾವ ಮೂಲದಿಂದ ಶೇಖರಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಅನುದಾನವನ್ನು ಯಾವ ಯಾವ ಕಾರ್ಯಗಳಿಗೆ ವಿನಿಯೋಗಿಸಲಾಗುವುದು; ಇದರ ಸಂಬಂಧ ಹಾಲಿ ಇರುವ ಮಾರ್ಗಸೂಚಿಗಳೇನು ; ಇಲ್ಲಿಯವರೆಗೆ ಖರ್ಚಾಗದೇ ಉಳಿದಿರುವ ಅನುದಾನವೆಷ್ಟು ; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಈ) ತುಮಕೂರು, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಿಂದ ಈ ಅನುದಾನದಡಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಉ) ಈ ಅನುದಾನವನ್ನು ಹಂಚಿಕೆ ಮಾಡುವ ಸಮಯದಲ್ಲಿ ಸರ್ಕಾರವು ವಿಧಾನ ಸಭಾ ಸದಸ್ಯರಿಗೆ ಮಾತ್ರ ಮನ್ನಣೆ ನೀಡಿ ವಿಧಾನ ಪರಿಷತ್ ಸದಸ್ಯರುಗಳಿಗೆ ಅನುದಾನವನ್ನು ಹಂಚಿಕೆ ಮಾಡದಿರುವುದು ಸರಿಯೇ ;

(ಊ) ಈ ತಾರತಮ್ಯವನ್ನು ಸರ್ಕಾರ ಯಾವ ಕಾಲಮಿತಿಯೊಳಗೆ ಸರಿಪಡಿಸುವುದು?